## 2 ನೇ ಆಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಳ್ಳಾರಿ

## ಸತ್ರ ಮೊಕದ್ದಮೆ ಸಂಖ್ಯೆ: 71/2025

ಪಿ.ಡಬ್ಲುಂ: 5 ಸಿಡಬ್ಲುಂ: 10

| | | |
|---|---|---|
| ಸಾಕ್ಷಿಯ ಹೆಸರು | : | ಜಯರಾಜ್ |
| ತಾಯಿ ಹೆಸರು | : | ಹನುಮಕ್ಕ |
| ವಯಸ್ಸು | : | 47 ವರ್ಷ |
| ವೃತ್ತಿ | : | ಎಚ್.ಸಿ 155, ಗಾಂಧಿನಗರ ಪೊ.ಠಾಣೆ ಬಳ್ಳಾರಿ |
| ವಾಸಸ್ಥಳ | : | ಬಳ್ಳಾರಿ |

### ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕ: 28.07.2026.

### ಮುಖ್ಯ ವಿಚಾರಣೆ ಮಾನ್ಯ ಸಾರ್ವಜನಿಕ ಅಭಿಯೋಜಕರಿಂದ:-

1) ನಾನು ದಿನಾಂಕ 2020 ರಿಂದ ಗಾಂಧಿನಗರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2) ದಿನಾಂಕ 26.09.2024 ರಂದು ಚಾಸಾ-11 ರವರು ಬಳ್ಳಾರಿಯ ಭಗತ್ ಸಿಂಗ್ ನಗರದ ಕಾಲುವೆ ಪಕ್ಕದಲ್ಲಿ ಕೃತ್ಯ ಸ್ಥಳ ಪಂಚನಾಮೆ ಮಾಡುವ ಸಮಯದಲ್ಲಿ ನಾನು ಹಾಜರಿದ್ದು ಸದರಿ ಪಂಚನಾಮೆಯ ಪ್ರಕ್ರಿಯೆಯ ಪೊಟೋವನ್ನು ನಿಪಿ-4 ರಂತೆ ನನ್ನ ವಿವೋ ಕಂಪನಿ ಮೊಬೈಲಿನಿಂದ ತೆಗೆದಿದ್ದೆ. ನಂತರ ನಾನು ಸ್ಟೂಡಿಯೋದಲ್ಲಿ ಮೊಬೈಲಿನಿಂದ ತೆಗೆದ ಪೊಟೋಗಳನ್ನು ಪ್ರಿಂಟ್ ಮಾಡಿಸಿ ತನಿಖಾಧಿಕಾರಿಗೆ ನೀಡಿದ್ದೆ. ಈ ಬಗ್ಗೆ ಕಲಂ 65(ಬಿ) ಭಾರತೀಯ ಸಾಕ್ಷ್ಯ ಅಧಿನಿಯಮದಡಿಯಲ್ಲಿ ಪ್ರಮಾಣ ಪತ್ರವನ್ನು ನೀಡಿದ್ದೆ. ಸಾಕ್ಷಿಯು ಗುರುತಿಸಿದ ಪ್ರಮಾಣ ಪತ್ರವನ್ನು ನಿಪಿ-6 ಎಂದು ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

### ಪಾಟೀಸವಾಲು ಆರೋಪಿ ಪರವಾಗಿ ಶ್ರೀ ವೈ.ಕೆ. ವಕೀಲರಿಂದ:

3) ನಾನು ಮೇಲಾಧಿಕಾರಿಗಳ ಆದೇಶವನ್ನು ಪಾಲನೆ ಮಾಡಬೇಕಾಗುತ್ತದೆ ಎಂದರೆ ಸರಿ. ನನಗೆ ಪೊಟೋಗ್ರಪಿಯಲ್ಲಿ ವಿಶೇಷ ತರಬೇತಿ ಇಲ್ಲ. ನಾನು ಈ ಪ್ರಕರಣಕ್ಕೆ ಅನುಕೂಲವಾಗುವ ರೀತಿಯಲ್ಲಿ ಮತ್ತು ಪಿರ್ಯಾದಿಗೆ ಸಹಾಯ ಮಾಡುವ ಸಲುವಾಗಿ ನಿಪಿ-4 ರಂತೆ ಸುಳ್ಳು ಪೊಟೋವನ್ನು ಸೃಷ್ಟಿ ಮಾಡಿ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

ಮೇಲಾಧಿಕಾರಿಗಳ ಮಾತನ್ನು ಕೇಳಿಕೊಂಡು ನಿಪಿ-6 ರಂತೆ ಸುಳ್ಳು ಪ್ರಮಾಣ ಪತ್ರವನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ನಿಪಿ-2 ಪಂಚನಾಮೆ ಸಮಯದಲ್ಲಿ ಹಾಜರಿರಲಿಲ್ಲ ಮತ್ತು ಯಾವುದೇ ಫೋಟೋವನ್ನು ತೆಗೆದಿಲ್ಲ ಎಂದರೆ ಸರಿಯಲ್ಲ. ನಾನು ಕಾನೂನು ಪ್ರಕ್ರಿಯೆಯನ್ನು ಸರಿಯಾಗಿ ಪಾಲನೆ ಮಾಡದೇ ನಿಪಿ6 ಅನ್ನು ನೀಡಿದ್ದೇನೆ ಎಂದರೆ ಸರಿಯಲ್ಲ.

**4)** ನಿಪಿ-**4** ಫೋಟೋಗೆ ಸಂಬಂಧಪಟ್ಟಂತೆ ನಾನು ಸರಿಯಾದ ಪ್ರಮಾಣ ಪತ್ರವನ್ನು ಕಾನೂನಿನ ಪ್ರಕಾರ ನೀಡಿಲ್ಲ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಮಾತನ್ನು ಕೇಳಿಕೊಂಡು ಪ್ರಕರಣಕ್ಕೆ ಅನುಕೂಲವಾಗುವಂತೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ. ಸರಿ ಇದೆ.

**2** ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬಳ್ಳಾರಿ.